ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

**ಸಂಖ್ಯೆ: ನಿ(ಪ್ರೌ.ಶಿ.)ಕ.ನಾ.ಸೇ.ಖಾ.ಅಧಿ.2011-12** **ದಿನಾಂಕ: 27ನೇ ಫೆಬ್ರವರಿ 2012**

## ಸುತ್ತೋಲೆ

ವಿಷಯ: ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ, 2011ನ್ನು ಜಾರಿಗೊಳಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಸಿಅಸುಇ 9 ಪ್ರಕಾ(ಆಸು)2012, ದಿನಾಂಕ 27.02.2012.

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ, 2011 ಜಾರಿಗೆ ಬಂದಿದ್ದು ಇದರ ಸಂಬಂಧಿತವಾಗಿ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ 6 ಸೇವೆಗಳನ್ನು ಗುರುತಿಸಿದ್ದು, ಈ ಸೇವೆಗಳನ್ನು ಸಮರ್ಪಕವಾಗಿ ತ್ವರಿತಗತಿತಲ್ಲಿ ನಾಗರೀಕರಿಗೆ ಸಿಗುವಂತಾಗಬೇಕು. ಈ ನಿಟ್ಟಿನಲ್ಲಿ ತಮ್ಮ ಕಛೇರಿಗಳಲ್ಲಿ ಕಂಪ್ಯೂಟರ್ ಮತ್ತು ಪೂರಕ ಉಪಕರಣಗಳನ್ನು ಸುಸ್ಥಿತಿಯಲ್ಲಿಡಲು ಅಗತ್ಯ ಕ್ರಮವಹಿಸುವುದು ಮತ್ತು ಅಂತರ್ಜಾಲ ಸಂಪರ್ಕವನ್ನು ಪಡೆಯುವುದು. ಈಗಾಗಲೇ ತಮ್ಮ ಕಛೇರಿಯಲ್ಲಿ ಬಿ.ಎಸ್.ಎನ್.ಎಲ್. ದೂರವಾಣಿ ಸಂಪರ್ಕವಿದ್ದು, ಈ ಸಂಪರ್ಕಕ್ಕೆ ಬ್ರಾಡ್‌ಬ್ಯಾಂಡ್ ಸಂಕರ್ಪವನ್ನು ಕೂಡಲೇ ಪಡೆದು ಅಂತರ್ಜಾಲವನ್ನು ಸಕ್ರಿಯಗೊಳಸಲು ಸೂಕ್ತಕ್ರಮ ಕೈಗೊಳ್ಳಲು ಸೂಚಿಸಿದೆ.

ಶಿಕ್ಷಣ ಇಲಾಖೆಯ 6 ಸೇವೆಗಳಿಗೆ ಸಂಬಂಧಿಸಿದಂತೆ ಅರ್ಜಿ ನಮೂನೆಗಳನ್ನು ಮುದ್ರಿಸಿ ಸಾಕಷ್ಟು ಸಂಖ್ಯೆಯಲ್ಲಿ ಸಾರ್ವಜನಿಕರಿಗೆ ಲಭ್ಯವಾಗುವಂತೆ ಕ್ರಮವಹಿಸುವುದು.

**ಸೇವೆಗಳ ವಿವರ**

1. ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮರು ಎಣಿಕೆ.
2. ಪರಿಕ್ಷಾ ಪತ್ರಿಕೆಗಳ ಮರು ಮೌಲ್ಯ ಮಾಪನ.
3. ಡ್ಯೂಪ್ಲಿಕೇಟ್ ಅಂಕ ಪಟ್ಟಿ/ ತಾತ್ಕಾಲಿಕ ಅಂಕ ಪಟ್ಟಿಯನ್ನು ನೀಡುವುದು.
4. ಹೊಸ ಶೈಕ್ಷಣಿಕ ಸಂಸ್ಥೆಗಳ ನೊಂದಣಿ.
5. ಹೊಸ ಶಾಲೆಗಳಿಗೆ ಮಾನ್ಯತೆ ನೀಡುವುದು
6. ಶಾಲೆಗಳ ಮಾನ್ಯತೆ ನವೀಕರಣ ಮಾಡುವುದು.

ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ, 2011 ರ ವಿವರಗಳನ್ನೊಳಗೊಂಡಂತೆ ಕಿರು ಪುಸ್ತಕವನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗಳ ಕಛೇರಿಯಿಂದ ಪಡೆಯುವುದು, ಹೆಚ್ಚಿನ ವಿವರಗಳಿಗಾಗಿ ವೆಬ್‌ಸೈಟ್‌ನಿಂದ ಮಾಹಿತಿ ಪಡೆಯಬಹುದಾಗಿದೆ. (WWW.dPAR.Kar.nic.in)

(ಕೆ. ಪಿ. ಹನುಮಂತರಾಯಪ್ಪ)
ನಿರ್ದೇಶಕರು[ಪ್ರೌಢ ಶಿಕ್ಷಣ]

ರವರಿಗೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.
3. ಕಛೇರಿ ಪ್ರತಿ.